ಅಕ್ಟೋಬರ್
2023

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್ | ಜಲೋತ್ಸವ ಮನೆ ಮನೆಗೆ ಗಂಗೆ | ಸ್ವಚ್ಛಮೇವ ಜಯತೇ SWACHHA MEVA JAYATE

# ಸ್ವಚ್ಛತಾವಾಣಿ

ವಾರ್ತಾಪತ್ರ

ಸ್ವಚ್ಛ ಸಂಕೀರ್ಣ | ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ



01

## ಮಾನ್ಯ ಮುಖ್ಯಮಂತ್ರಿ ಅವರಿಂದ ರಾಜ್ಯ ಮಟ್ಟದ ಸ್ವಚ್ಛ ಸರ್ವೇಕ್ಷಣ ಗ್ರಾಮೀಣ ಪ್ರಶಸ್ತಿ ಪ್ರದಾನ:

ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್ ಇಲಾಖೆಯು ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಹಮ್ಮಿಕೊಂಡಿದ್ದ 2023ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಸಮಾರಂಭ ಹಾಗೂ ಸ್ವಚ್ಛ ಸರ್ವೇಕ್ಷಣ ಗ್ರಾಮೀಣ ರಾಜ್ಯ ಮಟ್ಟದ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಉದ್ಘಾಟಿಸಿ, ಪ್ರಮಾಣ ಪತ್ರ ವಿತರಣೆ ಮಾಡಿದರು.

ಉಪಮುಖ್ಯಮಂತ್ರಿ ಶ್ರೀ ಡಿ.ಕೆ ಶಿವಕುಮಾರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿಬಿಟಿ ಇಲಾಖೆ ಸಚಿವರಾದ ಪ್ರಿಯಾಂಕ್ ಖರ್ಗೆ, ಶ್ರೀಮತಿ ಉಮಾ ಮಹದೇವನ್, ಅಪರ ಮುಖ್ಯ ಕಾರ್ಯದರ್ಶಿ, ಪಂ.ರಾಜ್, ಶ್ರೀ ಅಂಜುಮ್ ಪರ್ವೇಝ್, ಪ್ರಧಾನ ಕಾರ್ಯದರ್ಶಿ #RDPR, ನಾಗೇಂದ್ರ ಪ್ರಸಾದ್ ಕೆ. IAS, ನಿರ್ದೇಶಕರು #RDWSD, ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಮಾನ್ಯ ಮುಖ್ಯಮಂತ್ರಿ ಅವರಿಂದ ಎಸ್.ಬಿ.ಎಂ(ಗ್ರಾ), ಜೆಜೆಎಂ ಮಾದರಿ ಗ್ರಾಮಗಳ ಪ್ರದರ್ಶನ ಕಾರ್ಯಕ್ರಮ ಉದ್ಘಾಟನೆ:

02



ಗ್ರಾಮೀಣಾಭಿವೃದ್ಧಿ & ಪಂಚಾಯತ್ ರಾಜ್ ಇಲಾಖೆಯು ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಏರ್ಪಡಿಸಿದ್ದ ಎಸ್.ಬಿ.ಎಂ(ಗ್ರಾ) ಮತ್ತು ಜೆ.ಜೆ.ಎಂ ಮಾದರಿ ಗ್ರಾಮಗಳ ಪ್ರದರ್ಶನದ ಕಾರ್ಯಕ್ರಮದ ಉದ್ಘಾಟನೆಯನ್ನು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿಬಿಟಿ ಇಲಾಖೆ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ, ಶ್ರೀಮತಿ ಉಮಾ ಮಹದೇವನ್, ಅಪರ ಮುಖ್ಯ ಕಾರ್ಯದರ್ಶಿ, ಪಂ.ರಾಜ್, ಶ್ರೀ ಅಂಜುಮ್ ಪರ್ವೇಝ್, ಪ್ರಧಾನ ಕಾರ್ಯದರ್ಶಿ #RDPR, ಶ್ರೀ ನಾಗೇಂದ್ರ ಪ್ರಸಾದ್ ಕೆ. IAS, ನಿರ್ದೇಶಕರು #ಖಆಫಾಖಆ, ಇತರ ಅಧಿಕಾರಿಗಳು ಉಪಸ್ಥಿತರಿದ್ದರು.



03

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಐಟಿ/ಬಿಟಿ ಸಚಿವರಿಂದ ಇಲಾಖಾ ಪ್ರಗತಿ ಪರಿಶೀಲನಾ ಸಭೆ:

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಐ.ಟಿ/ಬಿ.ಟಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಅವರು ಕೆ.ಆರ್.ಡಿ.ಐ.ಎಲ್ ಸಭಾಂಗಣದಲ್ಲಿ ಇಲಾಖೆಯ ಅಧಿಕಾರಿಗಳೊಂದಿಗೆ ಜಲ ಜೀವನ್ ಮಿಷನ್ ಹಾಗೂ ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿಯವರಿಂದ ಕ್ಲಸ್ಟರ್ ಘನ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ:

04



ಶ್ರೀ ಅಂಜುಮ್ ಪರ್ವೇಝ್, ಪ್ರಧಾನ ಕಾರ್ಯದರ್ಶಿ #RDPR, ಮತ್ತು ಶ್ರೀ ಎಜಾಜ್ ಹುಸೇನ್, ಅ.ಇ. ಖಆಫಾಖಆ ಅವರು ಕೊಪ್ಪಳ ಜಿಲ್ಲೆ ಹುಲಿಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕ್ಲಸ್ಟರ್ ಘನ ತ್ಯಾಜ್ಯ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿ ಪ್ಲಾಸ್ಟಿಕ್ ತಾಜ್ಯ ನಿರ್ವಹಣೆ, ಗೋಬರಧನ್, ಗೋಶಾಲೆ, ಎರೆಹುಳು ತೊಟ್ಟಿ, ಔಷಧಿಯ ಸಸ್ಯಗಳ ನರ್ಸರಿ, ವೀಕ್ಷಿಸಿದರು.

ಈ ವೇಳೆ ಜಿ.ಪಂ CEO, ಉಪಕಾರ್ಯದರ್ಶಿ, ಬಳ್ಳಾರಿ ವಲಯದ ಅಧೀಕ್ಷಕ ಅಭಿಯಂತರರು, EE, ತಾಲೂಕ ಪಂಚಾಯತಿ EO, AEE, ಹುಲಿಗಿ, ಹೊಸಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಹುಲಿಗಿ, ಹೊಸಳ್ಳಿ ಪಿಡಿಒಗಳು ಹಾಗೂ ಇತರರು ಹಾಜರಿದ್ದರು.



05

## ಗ್ರಾ.ಕು & ನೈ ಇಲಾಖೆಯ ಅಭಿವೃದ್ಧಿ ಉಪಕಾರ್ಶಿಯವರಿಂದ ಎಸ್.ಬಿ.ಎಂ(ಗ್ರಾ) ಯೋಜನೆಯ ಕುರಿತು ಪ್ರಗತಿ ಪರಿಶೀಲನೆ:

ಶ್ರೀ ಮಹೇಶ್ ಎಸ್, ಸಿ ಉಪಕಾರ್ಯದರ್ಶಿಗಳು (ಅಭಿವೃದ್ಧಿ), #RDWSD ಇವರು ಕೊಪ್ಪಳ ಜಿಲ್ಲೆಗೆ ಭೇಟಿ ನೀಡಿ, ಜಿಲ್ಲೆಯ ವಿವಿದೆಡೆ ಬೂದು ನೀರು ನಿರ್ವಹಣೆ ಕಾಮಗಾರಿ, ಸ್ವಚ್ಛ ಸಂಕೀರ್ಣ ಘಟಕ ನಿರ್ವಹಣೆ ವೀಕ್ಷಿಸಿದರು.

ಈ ವೇಳೆ EO, ರಾಜ್ಯ ತಾಂತ್ರಿಕ ಮತ್ತು ಜಿಲ್ಲಾ ಸಮಾಲೋಚಕರು, ಗ್ರಾ.ಪಂ ಚುನಾಯಿತ ಪ್ರತಿನಿಧಿಗಳು, ಪಿಡಿಓಗಳು ಹಾಜರಿದ್ದರು.